ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೧೯**

ಒಟ್ಟು ಪ್ರಶ್ನೆಗಳು – ೧೫

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**(ಮುಂದುವರೆದ ಉಪವೇಶನಗಳು)**

**ಸೋಮವಾರ, ದಿನಾಂಕ: ೧೨ನೇ ಜೂನ್, ೨೦೧೭**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

೨. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೩. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೪. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೫. ವೈದ್ಯಕೀಯ ಶಿಕ್ಷಣ ಸಚಿವರು

೬. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೭. ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು

---

## ಬಿಡುಗಡೆಯಾದ ಅನುದಾನದ ವಿವರ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೨೭೧ (೨೭೪೯) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩–೧೪ ರಿಂದ ೨೦೧೭–೧೮ರವರೆಗೆ ಹೈದ್ರಾಬಾದ್ ಕರ್ನಾಟಕದ ಆರು ಜಿಲ್ಲೆಗಳಿಗೆ ಮಂಜೂರಾದ ಅನುದಾನದ ಮೊತ್ತ ಎಷ್ಟು ;

(ಆ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಮಂಜೂರಾದ ಅನುದಾನ ಎಷ್ಟು ;

(ಇ) ರಾಯಚೂರು ಜಿಲ್ಲೆಯಲ್ಲಿ ನೂತನವಾಗಿ ಪ್ರವಾಸೋದ್ಯಮ ತಾಣ ಪ್ರಾರಂಭಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮ ಏನು ?

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆ ಅಡಿ ಅನುದಾನದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೨೭೨ (೨೬೬೬) ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೬–೨೦೧೭ನೇ ಸಾಲಿನಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಬೀದರ್ ಜಿಲ್ಲೆಗೆ ನೀಡಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅನುದಾನ ನೀಡಿರುವ ಕಾಮಗಾರಿಗಳು ಪೂರ್ಣಗೊಂಡಿದೆಯೇ ; ಕಾಮಗಾರಿಗಳು ವಿಳಂಬವಾಗಲು ಕಾರಣಗಳೇನು ; (ವಿವರ ನೀಡುವುದು)

(ಇ) ೨೦೧೭–೨೦೧೮ನೇ ಸಾಲಿನಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಅನುದಾನ ಕೋರಿ ಪ್ರಸ್ತಾವನೆಗಳು ಬಂದಿದೆಯೇ ; ಬಂದಿದ್ದರೆ, ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ? (ವಿವರ ನೀಡುವುದು)

## ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳ ಅನುದಾನದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೨೭೩ (೨೬೩೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿವಿಧ ಹಿಂದುಳಿದ ವರ್ಗಗಳು ಹಾಗೂ ಇತರರು ನಡೆಸುವ ಹಾಸ್ಟೆಲ್‌ಗಳಿಗೆ ಅನುದಾನ ನೀಡಲು ೨ ವರ್ಷ ಮಾನದಂಡ ವಿಧಿಸಿರುವುದು ನಿಜವೇ ;

(ಆ) ಹಾಗಿದ್ದರೆ, ಅದಕ್ಕೆ ಕಾರಣವೇನು ;

(ಇ) ಹಿಂದುಳಿದ ವರ್ಗಗಳು ಹಾಗೂ ಇತರರು ಸಂಘ ಸಂಸ್ಥೆಗಳಿಂದ ಅವರದೇ ಆದ ಸ್ವಂತ ಕಟ್ಟಡದಲ್ಲಿ ವಿದ್ಯಾರ್ಥಿನಿಲಯ ಕಟ್ಟಿದ್ದರೆ, ಅಂತಹ ಹಾಸ್ಟೆಲ್‌ಗಳಿಗೆ ಪ್ರಥಮ ವರ್ಷದಿಂದಲೇ ಅನುದಾನ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು ; ನಿಯಮ ಸಡಿಲಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಇದರಿಂದ ವಿದ್ಯಾಸಿರಿ ಯೋಜನೆಗೆ ನೀಡುವ ಹಣ ಉಳಿತಾಯವಾಗಿ ವಿದ್ಯಾರ್ಥಿಗಳಿಗೆ ಹೆಚ್ಚಿನ ಸೌಲಭ್ಯ ಸಿಗುವುದಿಲ್ಲವೇ ?

## ಪ್ರಾಂಶುಪಾಲರ ಹುದ್ದೆ ಪ್ರಭಾರ, ಸೇವಾ ಜ್ಯೇಷ್ಠತೆ ಪರಿಗಣಿಸದಿರುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೨೭೪ (೨೬೮೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ, ಇಲ್ಲಿನ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ತರಬೇತಿ ಕೇಂದ್ರದಲ್ಲಿನ ಪ್ರಾಂಶುಪಾಲರ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಹುದ್ದೆಗೆ ಸೇವಾ ಜ್ಯೇಷ್ಠತಾ ಆಧಾರದ ಮೇಲೆ ಪ್ರಭಾರ ವಹಿಸುವ ಕ್ರಮ ಇಲಾಖೆಯಲ್ಲಿದೆಯೇ ;

(ಇ) ಇದ್ದಲ್ಲಿ, ಸದರಿ ತರಬೇತಿ ಕೇಂದ್ರದ ಪ್ರಾಂಶುಪಾಲರ ಹುದ್ದೆಗೆ ಪ್ರಭಾರ ನೇಮಕದಲ್ಲಿ ಸೇವಾ ಜ್ಯೇಷ್ಠತೆಯಲ್ಲಿ ೭–೮ ವರ್ಷ ಕಿರಿಯರನ್ನು ನೇಮಕ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ನ್ಯಾಯಬೆಲೆ ಅಂಗಡಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೭೫ (೨೭೩೬) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸಹಕಾರಿ ಸಂಘಗಳ ಮೂಲಕ ನಡೆಯುವ ನ್ಯಾಯ ಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಖಾಸಗಿ ಸಂಸ್ಥೆಗಳ ಮೂಲಕ ಕಾರ್ಯನಿರ್ವಹಿಸುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ನ್ಯಾಯ ಬೆಲೆ ಅಂಗಡಿಗಳ ವಿರುದ್ಧ ದಾಖಲಾಗುವ ದೂರುಗಳನ್ನು ಪರೀಕ್ಷಿಸಲು ಸಕ್ಷಮ ಪ್ರಾಧಿಕಾರವನ್ನು ನೇಮಿಸಲಾಗಿದೆಯೇ ; ಹೌದಾದಲ್ಲಿ ಸಕ್ಷಮ ಪ್ರಾಧಿಕಾರ ಯಾವುದು ; ಕಳೆದ ಮೂರು ವರ್ಷಗಳಲ್ಲಿ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ನ್ಯಾಯ ಬೆಲೆ ಅಂಗಡಿಗಳ ವಿರುದ್ಧ ದಾಖಲಾದ ದೂರುಗಳ ಸಂಖ್ಯೆ ಎಷ್ಟು ; (ವರ್ಷವಾರು, ಪ್ರಕರಣವಾರು ವಿವರ ನೀಡುವುದು)

(ಈ) ಸೇವೆಯ ಹೆಸರಿನಲ್ಲಿ ಇರುವ ಸಹಕಾರಿ ಸಂಘಗಳು ರಾಜ್ಯದಲ್ಲಿ ಕಡ್ಡಾಯವಾಗಿ ನ್ಯಾಯ ಬೆಲೆ ಅಂಗಡಿ ನಡೆಸುವಂತೆ ಕಾಯಿದೆಯಲ್ಲಿ ತಿದ್ದುಪಡಿ ತರಲಾಗುವುದೇ ?

## ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಮತ್ತು ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೨೭೬ (೨೭೭೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು ಹುದ್ದೆಗಳು ಎಷ್ಟು ; ಮತ್ತು ಯಾವಾಗಿನಿಂದ ಖಾಲಿ ಇವೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಂಯುಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ; ಹಾಗೂ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು ಯಾವುವು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ, ಸಂವಿಧಾನದ ಕಲಂ ೩೭೧(ಜೆ) ಪ್ರಕಾರ ಹೈದ್ರಾಬಾದ್ ಕರ್ನಾಟಕ ಭಾಗದವರಿಗಾಗಿ ಹುದ್ದೆಗಳನ್ನು ಪ್ರತ್ಯೇಕವಾಗಿ ವಿಂಗಡಿಸಲಾಗಿದೆಯೇ ; ಇದ್ದರೆ, ಸಂಪೂರ್ಣ ಮಾಹಿತಿ ನೀಡುವುದು ?

## ಜಾತಿ ಗಣತಿ ಕಾರ್ಯ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೭೭ (೨೭೮೭) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಜಾತಿ ಗಣತಿ ಕಾರ್ಯ ಪ್ರಾರಂಭವಾಗಿದ್ದು ಯಾವಾಗ ; ಸದರಿ ಜಾತಿ ಗಣತಿಗೆ ಯಾವ ನೌಕರರನ್ನು ಬಳಸಿಕೊಳ್ಳಲಾಗಿದೆ ;

(ಆ) ಜಾತಿ ಗಣತಿಯನ್ನು ಮಾಡಲು ಕಾರಣವೇನು ; ಇದರ ಉದ್ದೇಶವೇನು ;

(ಇ) ಈಗಾಗಲೇ ಕಾರ್ಯ ಪ್ರಾರಂಭಗೊಂಡಿದ್ದರೆ, ಜಾತಿ ಗಣತಿಯಲ್ಲಿ ಒಟ್ಟು ಎಷ್ಟು ಜಾತಿಗಳಿವೆ ; ಆ ಜಾತಿಗಳ ಉಪ ಜಾತಿಗಳೆಷ್ಟು ;

(ಈ) ಜಾತಿ ಗಣತಿ ಮಾಡಲು ವ್ಯಾಪಕ ವಿರೋಧವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಉ) ಜಾತಿ ಗಣತಿಯ ವರದಿ ಸಿದ್ಧವಾಗಿದೆಯೇ ; ವರದಿಯನ್ನು ಯಾವಾಗ ಬಹಿರಂಗಪಡಿಸಲಾಗುವುದು ; ಜಾತಿ ಗಣತಿ ಕಾರ್ಯಕ್ಕೆ ಖರ್ಚಾಗಿರುವ ಒಟ್ಟು ವೆಚ್ಚ ಎಷ್ಟು ?

## ಮಾರುಕಟ್ಟೆಯಲ್ಲಿ ಕೃತಕ ಆಹಾರ ಪದಾರ್ಥಗಳ ಮಾರಾಟವನ್ನು ತಡೆಗಟ್ಟುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ)**

೨೭೮ (೨೭೫೫+೨೭೨೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಇತ್ತೀಚಿನ ದಿನಗಳಲ್ಲಿ ಮಾರುಕಟ್ಟೆಯಲ್ಲಿ ಪ್ಲಾಸ್ಟಿಕ್ ಸಕ್ಕರೆ, ಪ್ಲಾಸ್ಟಿಕ್ ಅಕ್ಕಿ, ಪ್ಲಾಸ್ಟಿಕ್ ರಾಗಿ ಹಾಗೂ ಪ್ಲಾಸ್ಟಿಕ್ ಮೊಟ್ಟೆಗಳನ್ನು ಸರಬರಾಜು ಮಾಡಲಾಗುತ್ತದೆಂದು ಮಾಧ್ಯಮಗಳಲ್ಲಿ ವಿಸ್ತೃತವಾಗಿ ಪ್ರಕಟಗೊಂಡಿದ್ದು ನಿಜವೇ ; ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಇಂತಹ ಕೃತಕ ಅಹಾರ ಪದಾರ್ಥಗಳನ್ನು ಮಾರಾಟ ಮಾಡಲಾಗುತ್ತಿದೆ ; (ಮಾಹಿತಿ ನೀಡುವುದು)

(ಆ) ಈ ತರದ ಆಹಾರ ಪದಾರ್ಥಗಳ ಸೇವನೆಯಿಂದ ಜನರ ಆರೋಗ್ಯದ ಮೇಲೆ ಪರಿಣಾಮ ಉಂಟಾಗುವುದು ನಿಜವಲ್ಲವೇ ; ಕೃತಕ ಆಹಾರ

ಪದಾರ್ಥಗಳ ಮಾರಾಟಕ್ಕೆ ಸಂಬಂಧಿಸಿದಂತೆ, ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಹಾಗೂ ಅಂತಹವರ ವಿರುದ್ಧ ಯಾವ ಕಾನೂನು ಕ್ರಮ ಜರುಗಿಸಲಾಗಿದೆ ;

(ಇ) ಕೃತಕ ಆಹಾರ ಪದಾರ್ಥಗಳ ಮಾರಾಟವನ್ನು ತುರ್ತಾಗಿ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ; ಹಾಗೂ ಇದನ್ನು ಸಂಪೂರ್ಣವಾಗಿ ನಿಲ್ಲಿಸಲು ಹೊಸ ನಿಯಮಗಳನ್ನು ರಚಿಸಲಾಗುವುದೇ ; (ವಿವರ ನೀಡುವುದು)

(ಈ) ಕೃತಕ ಆಹಾರ ಪದಾರ್ಥಗಳನ್ನು ಗುರುತಿಸಲು ಸಾರ್ವಜನಿಕರಿಗೆ ಸರ್ಕಾರದಿಂದ ಮಾಹಿತಿಯನ್ನು ಕೊಡಲಾಗುವುದೇ ?

## ಜನರಲ್ ತಿಮ್ಮಯ್ಯ ಮ್ಯೂಸಿಯಂ ಕಾಮಗಾರಿಯ ವಿಳಂಬ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೭೯ (೨೭೩೪) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯ ಸನ್ನಿಸೈಡ್ ಮಡಿಕೇರಿಯಲ್ಲಿ ನಿರ್ಮಾಣವಾಗುತ್ತಿರುವ ಜನರಲ್ ತಿಮ್ಮಯ್ಯ ಮ್ಯೂಸಿಯಂ ಕಾಮಗಾರಿಯು ತುಂಬಾ ವಿಳಂಬವಾಗುತ್ತಿರಲು ಕಾರಣವೇನು ;

(ಆ) ಸದರಿ ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿ, ತಾಂತ್ರಿಕ ಮಂಜೂರಾತಿ ದೊರೆತ ದಿನಾಂಕಗಳು ಯಾವುವು ಹಾಗೂ ಕಾಮಗಾರಿ ಪ್ರಾರಂಭವಾದ ದಿನಾಂಕ ಯಾವುದು ;

(ಇ) ಈ ಕಾಮಗಾರಿಗೆ ಮಂಜೂರಾದ, ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನವೆಷ್ಟು ; ಹಾಗೂ ಮಂಜೂರಾದ ಅನುದಾನ ಬಿಡುಗಡೆಯಾಗದಿರಲು ಕಾರಣವೇನು ;

(ಈ) ಯಾವ ಕಾಲಮಿತಿಯೊಳಗೆ ಸದರಿ ಕಾಮಗಾರಿಯು ಪೂರ್ಣಗೊಂಡು ಲೋಕಾರ್ಪಣೆಗೊಳ್ಳುವುದು ?

## ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಕೊರೆಸಿದ ಕೊಳವೆ ಬಾವಿಗಳ ಕಾಮಗಾರಿ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ )** –

೨೮೦ (೨೭೮೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಮೂರು ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆಸಲಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ವರ್ಷಾವಾರು, ವಿವರ ನೀಡುವುದು) ;

(ಆ) ಇವುಗಳಲ್ಲಿ ಪೂರ್ಣ ಕಾಮಗಾರಿ ನಡೆದು ಫಲಾನುಭವಿಗಳ ಕೈ ಸೇರಿರುವ ಘಟಕಗಳೆಷ್ಟು ; ಹಾಗೂ ಇನ್ನೂ ಅಪೂರ್ಣವಾಗಿರುವ ಘಟಕಗಳೆಷ್ಟು ; ಇವುಗಳ ಇಂದಿನ ಸ್ಥಿತಿ ಏನು ; (ಇವುಗಳನ್ನು ಕೊರೆದಿರುವ ಊರಿನ ಸ್ಥಳ, ಫಲಾನುಭವಿಗಳ ವಿವರದೊಂದಿಗೆ ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿಯಲ್ಲಿ ಕೊಳವೆ ಬಾವಿಯನ್ನು ಕೊರೆಯಲು ಇರುವ ಮಾನದಂಡಗಳೇನು ; ಟೆಂಡರ್ ಪ್ರಕ್ರಿಯೆಯ ವಿಧಾನಗಳನ್ನು ಈ ಕಾಮಗಾರಿಯನ್ನು ಪಡೆದ ಟೆಂಡರ್‌ದಾರ ಸರಿಯಾದ ಸಮಯಕ್ಕೆ ಕಾಮಗಾರಿ ನಡೆಸದಿದ್ದರೆ, ಅವರ ಮೇಲೆ ಕೈಗೊಳ್ಳುವ ಕ್ರಮಗಳೇನು ; ಇಲ್ಲಿಯವರೆವಿಗೆ ಯಾವ ಟೆಂಡರ್‌ದಾರನ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಮಹಿಳಾ ಮತ್ತು ಮಕ್ಕಳು, ವಿಕಲಚೇತನರ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ )** –

೨೮೧ (೨೭೮೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರದ ಮಹಿಳಾ ಅಂಗವಿಕಲರ ವಸತಿ ನಿಲಯಗಳೆಷ್ಟು ; ರಾಜ್ಯ ಸರ್ಕಾರವು ಎಷ್ಟು ಅಲ್ಪಸಂಖ್ಯಾತರ ಉದ್ಯೋಗಸ್ಥ ಮಹಿಳೆಯರ ವಸತಿ

ನಿಲಯಗಳನ್ನು ನಡೆಸುತ್ತಿದೆ; ರಾಜ್ಯದಲ್ಲಿರುವ ಅನುದಾನಿತ ಅಲ್ಪಸಂಖ್ಯಾತರ ಉದ್ಯೋಗಸ್ಥರ ಮಹಿಳಾ ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಕಳೆದ ಮೂರು ವರ್ಷಗಳಲ್ಲಿ ಇಂದಿರಾಗಾಂಧಿ ಮಾತೃತ್ವ ಸಹಯೋಗದ ಯೋಜನೆಯಲ್ಲಿ ಎಷ್ಟು ಫಲಾನುಭವಿಗಳಿಗೆ ರಾಜ್ಯ ಸರ್ಕಾರದ ಸಹಾಯ ದೊರಕಿರುತ್ತದೆ ; ತಾಯಿ ಭಾಗ್ಯ ಯೋಜನೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರತಿ ಜಿಲ್ಲೆಯಲ್ಲಿ ಎಷ್ಟು ತಾಯಂದಿರಿಗೆ ರಾಜ್ಯ ಸರ್ಕಾರದ ಸಹಾಯಧನ ದೊರಕಿರುತ್ತದೆ ;

(ಇ) ಚೇತನ ಮತ್ತು ಮೈತ್ರಿ ಯೋಜನೆಯಲ್ಲಿ ರಾಜ್ಯ ಸರ್ಕಾರವು ಪ್ರತಿ ಜಿಲ್ಲೆಯಲ್ಲಿ ಎಷ್ಟು ಲೈಂಗಿಕ ಕಾರ್ಯಕರ್ತರು ಮತ್ತು ಮಂಗಳಮುಖಿಯರಿಗೆ ಸಹಾಯಧನವನ್ನು ನೀಡುತ್ತಿದೆ ; ಚೇತನ ಮತ್ತು ಮೈತ್ರಿ ಯೋಜನೆಯ ಸಹಾಯಧನವನ್ನು ಹೆಚ್ಚಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಬಿದಾಯಿ ಮತ್ತು ಮನಸ್ವಿನಿ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರವು ಪ್ರತಿ ಜಿಲ್ಲೆಯಲ್ಲಿ ಎಷ್ಟು ಫಲಾನುಭವಿಗಳಿಗೆ ಧನ ಸಹಾಯ ಮಾಡುತ್ತಿದೆ ; ಸುರಕ್ಷಾ ಯೋಜನೆ ಅಡಿಯಲ್ಲಿ ಆಸಿಡ್ ದಾಳಿಗೆ ಬಲಿಯಾದ ಮಹಿಳೆಯರಿಗೆ ರಾಜ್ಯ ಸರ್ಕಾರದ ನೌಕರಿ ನೀಡುವ ಯೋಜನೆ ಸರ್ಕಾರ ಕೈಗೆತ್ತಿಕೊಳ್ಳುವುದೇ ; ಸ್ಥೈರ್ಯ ನಿಧಿಯ ಮೊತ್ತವನ್ನು ಹೆಚ್ಚಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆಯೇ ?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸಾಂಸ್ಕೃತಿಕ ತಂಡಗಳಿಗೆ ನೀಡಿರುವ ಅನುದಾನ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೨೮೨ (೨೭೮೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೧–೧೨ರಿಂದ ಇದುವರೆಗೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸಾಂಸ್ಕೃತಿಕ ಸಂಘ/ಸಂಸ್ಥೆಗಳಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ನೀಡಲಾಗಿರುವ ಅನುದಾನವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೧–೧೨ರಿಂದ ಇದುವರೆಗೆ ರಾಜ್ಯದ ಎಲ್ಲಾ ಸಾಂಸ್ಕೃತಿಕ ಉತ್ಸವಗಳಿಗೆ ಕಳುಹಿಸಲಾಗುತ್ತಿರುವ ಸಾಂಸ್ಕೃತಿಕ ಕಲಾ ತಂಡಗಳು ಯಾವುವು ; (ವಿವರ ನೀಡುವುದು) ಮತ್ತು ಸದರಿ ಕಲಾ ತಂಡಗಳಿಗೆ ನೀಡಲಾಗುತ್ತಿರುವ ಗೌರವಧನ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ೨೦೧೧–೧೨ರಿಂದ ಇದುವರೆಗೆ ದೇಶದ ಹೊರ ರಾಜ್ಯ/ಹೊರ ದೇಶಗಳ ಸಾಂಸ್ಕೃತಿಕ ಸಂಘಗಳಿಗೆ ಸಾಂಸ್ಕೃತಿಕ ಸಮಾರಂಭಗಳನ್ನು ನಡೆಸಲು ನೀಡಿರುವ ಅನುದಾನ ಮತ್ತು ಕಾರ್ಯಕ್ರಮಗಳು ಯಾವುವು ? (ವಿವರ ನೀಡುವುದು)

## ಅಲಕ್ಷಿತ ಗಡಿ ಪ್ರದೇಶಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ ) –**

೨೮೩ (೨೬೭೩) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅಲಕ್ಷತಗೊಂಡಿರುವ ಗಡಿ ಪ್ರದೇಶದ ಗ್ರಾಮಗಳಿಗೆ ಹಾಗೂ ಕನ್ನಡ ಭಾಷೆಯ ರಕ್ಷಣೆಯ ಬಗ್ಗೆ ಅಧ್ಯಯನ ಮಾಡಲು ರಚಿಸಿದಂತಹ ಆಯೋಗಗಳು ಯಾವುವು ;

(ಆ) ಈ ಆಯೋಗಗಳು ನೀಡಿದ ವರದಿಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ಈ ವರದಿಗಳ ಬಗ್ಗೆ ಸರ್ಕಾರದ ನಿರ್ಧಾರಗಳೇನು ;

(ಈ) ವರದಿಯ ಅನುಷ್ಠಾನಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಕುರಿತು

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ ) –**

೧೮೪ (೧೭೧೮) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಒಟ್ಟು ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಆದರ್ಶ ಶಾಲೆ ಇವುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಶಾಲೆಗಳಲ್ಲಿ ಎಷ್ಟು ಶಾಲೆಗಳನ್ನು ಸ್ವಂತ ಕಟ್ಟಡದಲ್ಲಿ ನಡೆಸಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಎಷ್ಟು ಶಾಲೆಗಳು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ ; ಎಷ್ಟು ಶಾಲೆಗಳು ಬೇರೆ ಬೇರೆ ಶಾಲೆಗಳ ಕಟ್ಟಡಗಳಲ್ಲಿ ನಡೆಯುತ್ತಿವೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಈ ಶಾಲೆಗಳಿಗೆ ಸ್ವಂತ ಕಟ್ಟಡ ಒದಗಿಸಿಕೊಡುವಲ್ಲಿ ಸರ್ಕಾರಕ್ಕೆ ಇರುವ ತೊಂದರೆಗಳೇನು ; ಇದಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಉ) ಸ್ವಂತ ಕಟ್ಟಡ ಹೊಂದಿರುವ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ದಲಿತರ ಮೇಲಿನ ದೌರ್ಜನ್ಯ ಕೇಸುಗಳ ಇತ್ಯರ್ಥಕ್ಕೆ ಕ್ರಮಗಳ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೧೮೫ (೧೭೮೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಮೇಲಿನ ದೌರ್ಜನ್ಯ ಪ್ರಕರಣಗಳ ತ್ವರಿತ ವಿಲೇವಾರಿಗೆ ಸರ್ಕಾರ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಿದೆಯೇ ; ಸ್ಥಾಪಿಸಿದ್ದರೆ ಅದರ ವಿವರ ನೀಡುವುದು ;

(ಆ) ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಶೇಕಡ ಎಷ್ಟರ ಪ್ರಮಾಣದಲ್ಲಿ ಶಿಕ್ಷೆಯಾಗುತ್ತದೆ ;

(ಇ) ಸಾಕ್ಷ್ಯಾಧಾರಗಳ ಕೊರತೆಯಿಂದಾಗಿ ದೌರ್ಜನ್ಯ ಪ್ರಕರಣಗಳಲ್ಲಿ ಹಿನ್ನಡೆಯಾಗುತ್ತಿದ್ದು, ಅದನ್ನು ಸರಿದೂಗಿಸಲು ಪೊಲೀಸರು ಮತ್ತು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳ ಪಾತ್ರವೇಷ್ಟು ;

(ಈ) ಇಲ್ಲಿಯವರೆಗೆ ವಜಾಗೊಂಡ ಪ್ರಕರಣಗಳ ಪೈಕಿ ಮೇಲ್ಮನವಿ ಸಲ್ಲಿಸುವ ಪ್ರಕ್ರಿಯೆ ಚುರುಕಾಗಿದೆಯೇ ; (ವಿವರ ನೀಡುವುದು)

(ಉ) ಸುಳ್ಳು ಜಾತಿ ಪ್ರಮಾಣ ಪತ್ರ ಪಡೆದವರ ಜೊತೆಗೆ ಅವರಿಗೆ ಸಹಕರಿಸುವ ಅಧಿಕಾರಿಗಳಿಗೆ ಇರುವ ಶಿಕ್ಷೆಯ ಪ್ರಮಾಣವೆಷ್ಟು ;

(ಊ) ಕಳೆದ ೪ ವರ್ಷಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದವರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ವಿಧಿಸಲಾಗಿರುವ ಶಿಕ್ಷೆಯ ಪ್ರಮಾಣವೆಷ್ಟು ? (ವಿವರ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 218 ಪ್ರತಿಗಳು 1500 – ಪಿ2